ಆರ್ಥಿಕ ಇಲಾಖೆಯ ಸರ್ವೋಚ್ಚ ನ್ಯಾಯಾಲಯವು ಉಮಾದೇವಿ ಪ್ರಕರಣದಲ್ಲಿ ನೀಡಿರುವ ತೀರ್ಪಿನಲ್ಲಿ 'Regulation cannot be mode of recruitment' ಎಂದು ತಿಳಿಸಿರುವುದನ್ನು ಉಲ್ಲೇಖಿಸುತ್ತಾ, ಪ್ರಸ್ತಾವನೆಯನ್ನು ತಿರಸ್ಕರಿಸಿರುತ್ತದೆ.

**ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾಮಗಾರಿ**

**3867(4316); ಶ್ರೀ. ಮಂಜುನಾಥ ಹೆಚ್.ಪಿ (ಹುಣಸೂರು)**

ಅ) ಮೈಸೂರು ಜಿಲ್ಲೆ, ಹುಣಸೂರು ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಬಾಲಕರ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯ ರತ್ನಪುರಿ ಮತ್ತು ಹುಣಸೂರು ಇದರ ಕಟ್ಟಡ ನಿರ್ಮಾಣ ಪೂರ್ಣಗೊಳ್ಳದೇ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಕಾರಣವೇನು;

ಇ) ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

**ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)**

ಅ) ಹೌದು.

ಆ) ಮತ್ತು ಇ) ಸದರಿ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾಮಗಾರಿಗಳನ್ನು ಕೈಗೊಳ್ಳಲು ಅನುಮೋದಿತ ಅಂದಾಜು ಪಟ್ಟಿಗನುಗುಣವಾಗಿ ನಿರ್ಮಾಣ ಏಜೆನ್ಸಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಆದರೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ನಿರ್ಮಾಣ ಏಜೆನ್ಸಿ ವತಿಯಿಂದ ಪರಿಷ್ಕೃತ ಅಂದಾಜು ಪಟ್ಟಿಗಳನ್ನು ಸಲ್ಲಿಸಿರುತ್ತಾರೆ. ಸದರಿ ಪರಿಷ್ಕೃತ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆಗಾಗಿ ನೀಡಿ ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.